# All India Radio: Bangalore
# Regional Bulletin In Kannada
## 21.06.2025 / 6.40p.m.
## ಆಕಾಶವಾಣಿ ಬೆಂಗಳೂರು
## ಪ್ರದೇಶ ಸಮಾಚಾರ

ಮುಖ್ಯಾಂಶಗಳು

೧. ಮರು ಜಾತಿ ಗಣತಿಗೆ ಶಿಕ್ಷಕರನ್ನು ಬಳಸದಿರಲು ರಾಜ್ಯ ಸರ್ಕಾರ ನಿರ್ಧಾರ

೨. ಮಹಾರಾಷ್ಟ್ರಕ್ಕೆ ಸ್ಪರ್ಧೆ ನೀಡುವಂತೆ ರಾಜ್ಯದ ಸಕ್ಕರೆ ಕಾರ್ಖಾನೆಗಳಿಗೆ ಸಚಿವ ಶಿವಾನಂದ ಪಾಟೀಲ್ ಕರೆ

೩. ಎತ್ತಿನ ಹೊಳೆ ಯೋಜನೆ ನೀರು ಸಂಗ್ರಹಿಸಲು ಬೈರಗೊಂಡಲುವಿನಲ್ಲಿ ಜಲಾಶಯ ನಿರ್ಮಾಣ

೪. ವಸತಿ ಇಲಾಖೆಯಲ್ಲಿ ಭ್ರಷ್ಟಾಚಾರ ಆರೋಪ : ಸಮರ್ಥಿಸಿಕೊಂಡ ಕಾಂಗ್ರೆಸ್ ಶಾಸಕ ಬಿ.ಆರ್. ಪಾಟೀಲ್

೫. ರಾಜ್ಯದ ವಿವಿಧೆಡೆ ೧೧ನೇ ಅಂತಾರಾಷ್ಟ್ರೀಯ ಯೋಗ ದಿನಾಚರಣೆ -ಬೆಂಗಳೂರಿನ ಟಿಪ್ಪು ಅರಮನೆಯಲ್ಲಿ ಸಚಿವ ಶೋಭಾ ಕರಂದ್ಲಾಜೆ ಭಾಗಿ

**<><><><>**

ರಾಜ್ಯ ಸರ್ಕಾರ ಮತ್ತೊಮ್ಮೆ ನಡೆಸಲಿರುವ ಸಾಮಾಜಿಕ, ಶೈಕ್ಷಣಿಕ, ಆರ್ಥಿಕ ಸಮೀಕ್ಷೆಗೆ ಸರ್ಕಾರಿ ಶಾಲಾ ಶಿಕ್ಷಕರನ್ನು ಬಳಕೆ ಮಾಡುವುದಿಲ್ಲ ಎಂದು ಶಿಕ್ಷಣ ಸಚಿವ ಮಧು ಬಂಗಾರಪ್ಪ ಸ್ಪಷ್ಟಪಡಿಸಿದ್ದಾರೆ. ಶಿವಮೊಗ್ಗದಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಜಾತಿಗಣತಿಯ ಜವಾಬ್ದಾರಿ ಹೊರಗುತ್ತಿಗೆಗೆ ನೀಡಲು ಯೋಚಿಸಲಾಗಿದೆ ಎಂದು ತಿಳಿಸಿದ್ದಾರೆ. ಸಮೀಕ್ಷೆ ಕಾರ್ಯಕ್ಕೆ ಶಿಕ್ಷಕರನ್ನು ನಿಯೋಜಿಸಿದರೆ ಮಕ್ಕಳಿಗೆ ಪಾಠ ಪ್ರವಚನಕ್ಕೆ ತೊಂದರೆಯಾಗಲಿದೆ ಎಂದು ಹೇಳಿದ್ದಾರೆ. ಶಾಲಾ ಶಿಕ್ಷಣ ಇಲಾಖೆಯಲ್ಲಿ ೫೧ ಸಾವಿರ ಶಿಕ್ಷಕರ ಕೊರತೆಯಿದ್ದು, ೧೮ ಸಾವಿರ ಶಿಕ್ಷಕರ ನೇಮಕಕ್ಕೆ ಸರ್ಕಾರದ ಒಪ್ಪಿಗೆ ದೊರೆತಿದೆ ಎಂದು ತಿಳಿಸಿದ್ದಾರೆ.

<><><><>

ಮಹಾರಾಷ್ಟ್ರ ಸಕ್ಕರೆ ಉದ್ಯಮಕ್ಕೆ ಸ್ಪರ್ಧೆ ನೀಡುವುದು ಸರ್ಕಾರದ ಆಶಯವಾಗಿದ್ದು, ಈ ನಿಟ್ಟಿನಲ್ಲಿ ರಾಜ್ಯದ ಸಕ್ಕರೆ ಕಾರ್ಖಾನೆಗಳಿಗೆ ಅಗತ್ಯ ಸಹಾಯ, ಸಹಕಾರ ನೀಡಲಾಗುವುದೆಂದು ಸಕ್ಕರೆ ಮತ್ತು ಕಬ್ಬು ಅಭಿವೃದ್ಧಿ ಸಚಿವ ಶಿವಾನಂದ ಪಾಟೀಲ ತಿಳಿಸಿದ್ದಾರೆ. ವಿವಿಧ ವಿಭಾಗಗಳಲ್ಲಿ ಉತ್ತಮ ಸಾಧನೆ ಮಾಡಿದ ಸಕ್ಕರೆ ಕಾರ್ಖಾನೆಗಳಿಗೆ ಬೆಳಗಾವಿಯ ಎಸ್.ನಿಜಲಿಂಗಪ್ಪ ಸಕ್ಕರೆ ಸಂಸ್ಥೆಯಿಂದ ಪ್ರಶಸ್ತಿ ಪ್ರಧಾನ ಮಾಡಿ ಮಾತನಾಡಿದ ಅವರು, ಸಕ್ಕರೆ ಕಾರ್ಖಾನೆಗಳಿಗೆ ಸ್ವಯಂ ನಿಯಂತ್ರಣ ಅಗತ್ಯ ಎಂದು ಹೇಳಿದ್ದಾರೆ. ಸಕ್ಕರೆ ಕಾರ್ಖಾನೆಗಳ ಪ್ರಗತಿಯಲ್ಲಿ ರಾಜ್ಯ ಸರ್ಕಾರದ ಕೊಡುಗೆ ಗಣನೀಯವಾಗಿದೆ. ಸರ್ಕಾರ ರೈತರಿಗೆ ನೀರು, ವಿದ್ಯುತ್, ಕಬ್ಬಿನ ಬೀಜ ಸೇರಿದಂತೆ ಹಲವು ಸವಲತ್ತುಗಳನ್ನು ಒದಗಿಸದಿದ್ದರೆ ಕಾರ್ಖಾನೆಗಳು ಪ್ರಗತಿ ಸಾಧಿಸಲು ಸಾಧ್ಯವಿಲ್ಲ. ಸರ್ಕಾರದ ಎಲ್ಲಾ ಸೌಲಭ್ಯ ಬಳಸಿಕೊಂಡು ರಾಜ್ಯದ ಸಕ್ಕರೆ ಕಾರ್ಖಾನೆಗಳು ಇತರ ರಾಜ್ಯಗಳಿಗೂ ಮಾದರಿಯಾಗುವಂತೆ ಕರೆ ನೀಡಿದ್ದಾರೆ.

<><><><>

ಬೆಂಗಳೂರಿನಂತೆ ತುಮಕೂರು ಜಿಲ್ಲೆಯ ಸಮಗ್ರ ಅಭಿವೃದ್ಧಿಗೆ ನಮ್ಮ ಸರ್ಕಾರ ಬದ್ಧವಾಗಿದ್ದು, ಅನೇಕ ಯೋಜನೆ ರೂಪಿಸುತ್ತಿದೆ ಎಂದು ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ತಿಳಿಸಿದ್ದಾರೆ. ತುಮಕೂರಿನಲ್ಲಿ ಮಾತನಾಡಿದ ಅವರು, ರೈತರ ಹಿತ ಕಾಪಾಡಿಕೊಂಡು ಎತ್ತಿನಹೊಳೆ ಯೋಜನೆ ನೀರನ್ನು ಸಂಗ್ರಹಿಸಲು ಕೊರಟಗೆರೆ ತಾಲೂಕಿನ ಬೈರಗೊಂಡಲುವಿನಲ್ಲಿ ಜಲಾಶಯ ನಿರ್ಮಿಸಲಾಗವುದು ಎಂದು ತಿಳಿಸಿದ್ದಾರೆ. ಇದೇ

ವೇಳೆ ಜಲಾಶಯ ನಿರ್ಮಾಣದಿಂದ ಮುಳುಗೊಡೆಯಾಗುವ ರೈತರಿಗೆ ಅನ್ಯಾಯವಾಗದಂತೆ ಯೋಜನೆ ಜಾರಿ ಮಾಡುವುದಾಗಿ ಭರವಸೆ ನೀಡಿದ್ದಾರೆ.

<><><><>

ವಸತಿ ಇಲಾಖೆಯಲ್ಲಿ ವ್ಯಾಪಕ ಭ್ರಷ್ಟಾಚಾರ ನಡೆದಿದೆ ಎಂದು ಆರೋಪಿಸಲಾದ ಆಡಿಯೋ ಕ್ಲಿಪ್ ಅಧಿಕೃತವಾಗಿದೆ ಹಾಗೂ ತಾವು ಮಾಡಿರುವ ಆರೋಪಗಳು ನಿಜ ಎಂದು ಕರ್ನಾಟಕ ರಾಜ್ಯ ನೀತಿ ಮತ್ತು ಯೋಜನಾ ಆಯೋಗದ ಉಪಾಧ್ಯಕ್ಷ ಹಾಗೂ ಕಾಂಗ್ರೆಸ್ ಶಾಸಕ ಬಿ.ಆರ್. ಪಾಟೀಲ್ ತಿಳಿಸಿದ್ದಾರೆ.

ಬೆಂಗಳೂರಿನಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಇದು ತಮ್ಮದೇ ಧ್ವನಿ ಎಂದು ಸ್ಪಷ್ಟಪಡಿಸಿದ್ದಾರೆ. ಈ ಕುರಿತಂತೆ ರಾಜ್ಯ ಸರ್ಕಾರ ತನಿಖೆ ನಡೆಸಬೇಕು ಎಂದು ಆಗ್ರಹಿಸಿದ್ದಾರೆ.

<><><><>

ಬಿಜೆಪಿ ರಾಷ್ಟ್ರೀಯ ನಾಯಕತ್ವವು ರಾಜ್ಯಾಧ್ಯಕ್ಷರ ನೇಮಕವನ್ನು ಶೀಘ್ರದಲ್ಲೇ ಅಂತಿಮಗೊಳಿಸಲಿದೆ ಎಂದು ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ ತಿಳಿಸಿದ್ದಾರೆ. ಬೆಂಗಳೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಬಿಜೆಪಿ ರಾಷ್ಟ್ರೀಯ ಪಕ್ಷವಾಗಿದ್ದು, ಜಿಲ್ಲಾ ಅಧ್ಯಕ್ಷರು ಹಾಗೂ ಪಕ್ಷದ ಹಿರಿಯ ನಾಯಕರ ಅಭಿಪ್ರಾಯಗಳನ್ನು ಪರಿಗಣಿಸಿ ಶೀಘ್ರದಲ್ಲೇ ಅಂತಿಮ ನಿರ್ಧಾರ ತೆಗೆದುಕೊಳ್ಳಲಿದೆ. ಕಳೆದ ಒಂದೂವರೆ ವರ್ಷದಿಂದ ಪಕ್ಷದ ಕಾರ್ಯಕರ್ತನಾಗಿ ತಮಗೆ ವಹಿಸಿದ ಜವಾಬ್ದಾರಿಯನ್ನು ಪ್ರಾಮಾಣಿಕತೆಯಿಂದ ನಿರ್ವಹಿಸಿದ್ದೇನೆ ಎಂದು ಹೇಳಿದ್ದಾರೆ.

<><><><>

ಈ ಬಾರಿಯ ವಿಶ್ವವಿಖ್ಯಾತ ನಾಡಹಬ್ಬ ದಸರಾ ಮಹೋತ್ಸವವನ್ನು ೧೦ ದಿನದ ಬದಲಾಗಿ ೧೧ ದಿನ ಆಚರಿಸುವ ಕುರಿತು ರಾಜವಂಶಸ್ಥೆ ಪ್ರಮೋದಾ ದೇವಿ ಒಡೆಯರ್ ಸ್ಪಷ್ಟನೆ ನೀಡಿದ್ದಾರೆ. ಪತ್ರಿಕಾ ಪ್ರಕಟಣೆ ಮೂಲಕ ಸ್ಪಷ್ಟನೆ ನೀಡಿರುವ ಅವರು, ೧೧ ದಿನ ದಸರಾ ಆಚರಣೆ ಇದೇ ಮೊದಲೇನಲ್ಲ. ಈ ಹಿಂದೆಯೂ ೧೧ ದಿನ ದಸರಾ ಆಚರಣೆ ಮಾಡಲಾಗಿತ್ತು ಎಂದು ಮಾಹಿತಿ ನೀಡಿದ್ದಾರೆ. ಲೂನಾರ್ ಕ್ಯಾಲೆಂಡರ್ ಮೂಲ ಪಂಚಾಂಗವನ್ನು ಮೈಸೂರು ಅರಮನೆ ಪಾಲಿಸುತ್ತಿದೆ. ಪಂಚಾಂಗ ಹಾಗೂ ಲೂನಾರ್ ಕ್ಯಾಲೆಂಡರ್ ಆಧರಿಸಿ ದಸರಾ ಆಚರಣೆ ಎಂದಿನಂತೆ ನಡೆಯಲಿದೆ ಎಂದು ಸ್ಪಷ್ಟಪಡಿಸಿದ್ದಾರೆ.

<><><><>

ರಾಜ್ಯದ ವಿವಿಧೆಡೆ ಇಂದು ೧೧ನೇ ಅಂತಾರಾಷ್ಟ್ರೀಯ ಯೋಗದಿನ ಆಚರಿಸಲಾಯಿತು. ಬೆಂಗಳೂರಿನ ಟಿಪ್ಪು ಅರಮನೆಯಲ್ಲಿ ನಡೆದ ಯೋಗ ದಿನಾಚರಣೆಯಲ್ಲಿ ಕೇಂದ್ರ ಸಚಿವೆ ಶೋಭಾ ಕರಂದ್ಲಾಜೆ ಸಾರ್ವಜನಿಕರೊಂದಿಗೆ ಯೋಗ ಮಾಡುವ ಮೂಲಕ ಗಮನ ಸೆಳೆದರು.

ಯೋಗವು ದೈಹಿಕ ಹಾಗೂ ಮಾನಸಿಕ ಚೈತನ್ಯವನ್ನು ಎತ್ತಿ ಹಿಡಿಯುವ ವಿದ್ಯೆಯಾಗಿದ್ದು, ಸರ್ವರು ಯೋಗಾಭ್ಯಾಸ ರೂಢಿಸಿಕೊಳ್ಳಬೇಕೆಂದು ಕರೆ ನೀಡಿದರು.

ಮೈಸೂರಿನ ಅರಮನೆ ಆವರಣದಲ್ಲಿ ಇಂದು ವಿಶ್ವ ಯೋಗ ದಿನಾಚರಣೆಯನ್ನು ಆಚರಿಸಲಾಯಿತು. ಜಿಲ್ಲಾ ಉಸ್ತುವಾರಿ ಸಚಿವ ಎಚ್.ಸಿ. ಮಹದೇವಪ್ಪ ಯೋಗಾಸನ ಮಾಡುವ ಮೂಲಕ ಚಾಲನೆ ನೀಡಿದರು. ಇನ್ನೊಂದೆಡೆ ಮೈಸೂರಿನ ಪಯಣ ಕಾರ್ ಮ್ಯೂಸಿಯಂನಲ್ಲಿಯೂ ಯೋಗ ದಿನಾಚರಣೆ ಆಚರಿಸಲಾಯಿತು.

ಭಾರತೀಯ ಸಂಸ್ಕೃತಿಯ ಪುರಾತನ ಪರಂಪರೆಯಾದ ಯೋಗಕ್ಕೆ ಅಂತರಾಷ್ಟ್ರೀಯ ಮನ್ನಣೆ ದೊರೆತಿರುವುದು ನಮ್ಮೆಲ್ಲರ ಹೆಮ್ಮೆ ಎಂದು ಚಿಕ್ಕಬಳ್ಳಾಪುರ ಜಿಲ್ಲಾ ಉಸ್ತುವಾರಿ ಸಚಿವ ಡಾ.ಕೆ.ಸುಧಾಕರ್ ತಿಳಿಸಿದ್ದಾರೆ. ದಾವಣಗೆರೆ ಜಿಲ್ಲಾಡಳಿತ ಮತ್ತು ವಿವಿಧ ಯೋಗ ಸಂಸ್ಥೆಗಳ ಸಹಯೋಗದಲ್ಲಿ ಹಮ್ಮಿಕೊಂಡಿದ್ದ ಯೋಗ ದಿನಾಚರಣೆಯನ್ನು ಸಂಸದೆ ಡಾ.ಪ್ರಭಾ ಮಲ್ಲಿಕಾರ್ಜುನ ಉದ್ಘಾಟಿಸಿದರು. ಚಿಕ್ಕಮಗಳೂರು ಜಿಲ್ಲಾಡಳಿತದ ವತಿಯಿಂದ ಇಂದು ಒಕ್ಕಲಿಗರ ಸಮುದಾಯ ಭವನದಲ್ಲಿ ಯೋಗ ದಿನಾಚರಣೆ ಆಚರಿಸಲಾಯಿತು.

ಯೋಗಕ್ಕೆ ಭಾರತ ದೇಶವೇ ವಿಶ್ವಗುರು ಎಂದು ಮಂಡ್ಯ ಜಿಲ್ಲಾಧಿಕಾರಿ ಡಾ.ಕುಮಾರ ತಿಳಿಸಿದ್ದಾರೆ. ಮಂಡ್ಯ ನಗರದ ಪಿ.ಇ.ಟಿ ಕ್ರಿಕೆಟ್ ಮೈದಾನದಲ್ಲಿ ಆಯೋಜಿಸಲಾಗಿದ್ದ ಯೋಗ ದಿನಾಚರಣೆಯಲ್ಲಿ ಭಾಗವಹಿಸಿ ಮಾತನಾಡಿದ ಅವರು, ಯೋಗ ಎನ್ನುವುದು ಭಾರತ ದೇಶದ ಸಂಸ್ಕೃತಿಯ ಪ್ರತೀಕ ಎಂದು ಹೇಳಿದ್ದಾರೆ.

ಪ್ರತಿದಿನ ಯೋಗವನ್ನು ತಮ್ಮ ಜೀವನದಲ್ಲಿ ಅಳವಡಿಸಿಕೊಳ್ಳುವ ಮೂಲಕ ಆರೋಗ್ಯ ಕಾಪಾಡಿಕೊಳ್ಳಬೇಕು ಎಂದು ಕೋಲಾರದ ಸಂಸದ ಎಂ.ಮಲ್ಲೇಶ್ ಬಾಬು ಅಭಿಪ್ರಾಯಪಟ್ಟಿದ್ದಾರೆ.

ಒತ್ತಡಗಳನ್ನು ನಿವಾರಿಸುವ ದಿವ್ಯ ಔಷಧಿ ಯೋಗವಾಗಿದ್ದು, ಪ್ರಾಚೀನ ನಾಗರಿಕತೆಯ ಅಮೂಲ್ಯ ಕೊಡುಗೆಯಾಗಿದೆ ಎಂದು ಕೊಪ್ಪಳ ಸಂಸದ ಕೆ.ರಾಜಶೇಖರ ಬಸವರಾಜ ಹಿಟ್ನಾಳ ತಿಳಿಸಿದ್ದಾರೆ.

ಯಾದಗಿರಿಯಲ್ಲೂ "೧೧ನೇ ಅಂತರಾಷ್ಟ್ರೀಯ ಯೋಗ ದಿನಾಚರಣೆ" ಕಾರ್ಯಕ್ರಮ ನಡೆಯಿತು.

ಹಾವೇರಿಯಲ್ಲಿ ಜಿಲ್ಲಾಡಳಿತ, ಆಯುಷ್ ಇಲಾಖೆ, ಸಹಯೋಗದಲ್ಲಿ ೧೧ನೇ ಅಂತರಾಷ್ಟ್ರೀಯ ಯೋಗ ದಿನಾಚರಣೆಯನ್ನು "ಒಂದು ಭೂಮಿ, ಒಂದು ಆರೋಗ್ಯಕ್ಕಾಗಿ ಯೋಗ" ಎಂಬ ಘೋಷವಾಕ್ಯದೊಂದಿಗೆ ಆಚರಿಸಲಾಯಿತು.

ವಿಜಯಪುರದಲ್ಲಿ ಜಿಲ್ಲಾಧಿಕಾರಿ ಟಿ.ಭೂಬಾಲನ್ ಮಾತನಾಡಿ, ಯೋಗವನ್ನು ಪಾಶ್ಚಿಮಾತ್ಯ ಜಗತ್ತಿಗೆ ಪರಿಚಯಿಸಿದ ಹೆಮ್ಮೆ ನಮ್ಮ ದೇಶದ್ದು ಎಂದು ಅಭಿಪ್ರಾಯಪಟ್ಟಿದ್ದಾರೆ.

ವಿಜಯನಗರದಲ್ಲಿ ಜಿಲ್ಲಾಡಳಿತ ಜಿಲ್ಲಾ ಪಂಚಾಯತ್ ಆಯುಷ್ ಇಲಾಖೆ ಸೇರಿದಂತೆ ವಿವಿಧ ಸಂಘಟನೆಗಳ ನೇತೃತ್ವದಲ್ಲಿ ಹೊಸಪೇಟೆ ನಗರದ ಸ್ವತಂತ್ರ ಉದ್ಯಾನವನದಲ್ಲಿ ೧೧ನೇ ಅಂತರಾಷ್ಟ್ರೀಯ ಯೋಗ ದಿನಾಚರಣೆ ನಡೆಯಿತು.

<><><>

ಧಾರವಾಡ ಜಿಲ್ಲೆಯಲ್ಲಿ ಸಾಕಷ್ಟು ಕೆರೆಗಳಿದ್ದು, ತಡೆಗೋಡೆ ನಿರ್ಮಾಣ ಮಾಡಲು ಅಧಿಕಾರಿಗಳಿಗೆ ಸೂಚಿಸಲಾಗಿದೆ ಎಂದು ಕಾರ್ಮಿಕ ಸಚಿವ ಸಂತೋಷ ಲಾಡ್ ತಿಳಿಸಿದ್ದಾರೆ.

ಧಾರವಾಡ ಜಿಲ್ಲೆಯ ಕುಂದಗೋಳದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಕೆರೆ ಸುತ್ತಮುತ್ತಲಿನ ಪ್ರದೇಶದಲ್ಲಿ ಮಕ್ಕಳು ಓಡಾಡದಂತೆ ಸಾರ್ವಜನಿಕರು, ಅಧಿಕಾರಿಗಳು ಕ್ರಮ ವಹಿಸಬೇಕು ಎಂದು ಸೂಚಿಸಿದ್ದಾರೆ.

<><><>

ಸಂಕ್ಷಿಪ್ತ ಸುದ್ದಿಗಳು

ಬೇಸಿಗೆ ಬಿಸಿಲು ತಣಿಸಿ, ಉತ್ತಮ ಮಳೆ, ಪರಿಶುದ್ಧ ಗಾಳಿ, ಉತ್ತಮ ವಾತಾವರಣ ನಿರ್ಮಾಣಕ್ಕೆ ಗ್ರಾಮದ ಪ್ರತಿ ಮನೆ ಎದುರು ಸಸಿ ನೆಟ್ಟು ಪೋಷಿಸಿದರೆ ಮಾತ್ರ ಗ್ರಾಮ ಹಸಿರು ಧಾಮವಾಗಲು ಸಾಧ್ಯ ಎಂದು ಯಾದಗಿರಿ ಜಿಲ್ಲಾ ಪಂಚಾಯಿತಿ ಮುಖ್ಯಕಾರ್ಯನಿರ್ವಾಹಕ ಅಧಿಕಾರಿ ಲವೀಶ್ ಒರಡಿಯಾ ಅಭಿಪ್ರಾಯಪಟ್ಟಿದ್ದಾರೆ.

<><><>